


THE RURAL MIRROR Constructive Media
www.theruralmirror.com

ದ ರೂರಲ್ ಮಿರರ್.ಕಾಂ

# ಅರಣ್ಯದಲ್ಲಿ ದನ ಕರು ಮೇಯಿಸುವುದಕ್ಕೆ ನಿಷೇಧ

ರಾಜ್ಯದ ಎಲ್ಲಾ ಅರಣ್ಯ ಪ್ರದೇಶದೊಳಗೆ ದನ-ಕರು, ಮೇಕೆ, ಕುರಿ ಮೇಯಿಸುವುದನ್ನು ನಿಷೇಧಿಸಲು ನಿಯಮಾನುಸಾರ ಕ್ರಮ ವಹಿಸುವಂತೆ ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಸೂಚನೆ ನೀಡಿದ್ದಾರೆ. ಈ ಸಂಬಂಧ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳಿಗೆ ಸೂಚನೆ ನೀಡಿರುವ ಅವರು, ದೊಡ್ಡ ಸಂಖ್ಯೆಯಲ್ಲಿ ಜಾನುವಾರುಗಳನ್ನು ಅರಣ್ಯ ಪ್ರದೇಶದೊಳಗೆ ಮೇಯಲು ಬಿಡುವುದರಿಂದ ಕಾಡಿನಲ್ಲಿ ಆಗಷ್ಟೇ ಮೊಳಕೆ ಒಡೆದ ಚಿಕ್ಕಪುಟ್ಟ ಸಸಿಗಳು ಬೆಳೆಯದೆ, ಅರಣ್ಯ ಸಂವರ್ಧನೆಗೆ ಅಡ್ಡಿಯಾಗುತ್ತಿದೆ ಎಂದು ಪರಿಸರಪ್ರೇಮಿಗಳು ಅಭಿಪ್ರಾಯಪಟ್ಟಿರುವುದಾಗಿ ತಿಳಿಸಿದ್ದಾರೆ. ಸಾಕು ಪ್ರಾಣಿಗಳು ಕಾಡಿನಲ್ಲಿ ಮೇಯುವುದರಿಂದ ಸಸ್ಯಹಾರಿ ಪ್ರಾಣಿಗಳಿಗೂ ಮೇವಿನ ಕೊರತೆ ಉಂಟಾಗಲಿದೆ. ಊರಿನಿಂದ ಕಾಡಿಗೆ ಮೇಯಲು ಹೋಗುವ ಪ್ರಾಣಿಗಳಿಂದ ವನ್ಯಜೀವಿಗಳು ಸಾಂಕ್ರಾಮಿಕ ರೋಗಗಳಿಗೆ ತುತ್ತಾಗುವ ಸಾಧ್ಯತೆಯೂ ಇರುತ್ತದೆ ಎಂಬ ಅಂಶವನ್ನೂ ಉಲ್ಲೇಖಿಸಿದ್ದಾರೆ. ಅರಣ್ಯ ಸಂವರ್ಧನೆಯಾಗದಿದ್ದರೆ ವನ್ಯಜೀವಿ-ಮಾನವ ಸಂಘರ್ಷ ಹೆಚ್ಚಳವಾಗಲಿದೆ. ಹೀಗಾಗಿ ಕೂಡಲೇ ಅಭಯಾರಣ್ಯಗಳಲ್ಲಿ ಮೇಕೆ, ಕುರಿ, ದನಕರುಗಳನ್ನು ಮೇಯಿಸುವುದನ್ನು ನಿಷೇಧಿಸಬೇಕು ಎಂದು ಸೂಚಿಸಿದ್ದಾರೆ.



ಪರಿಸರ ಪ್ರೇಮಿಗಳು ಕೂಡಾ ಕಳೆದ ಕೆಲವು ಸಮಯಗಳಿಂದ ಈ ಬಗ್ಗೆ ಮಾತನಾಡುತ್ತಿದ್ದರು. ದನ ಕರುಗಳು ದೊಡ್ಡ ಪ್ರಮಾಣದಲ್ಲಿ ಅರಣ್ಯದಲ್ಲಿ ಹುಲ್ಲು ಮೇಯುವುದರಿಂದ ಕಾಡಿನಲ್ಲಿರುವ ಕಾಡು ಪ್ರಾಣಿಗಳಿಗೆ ಮೇವಿನ ಕೊರತೆಯಾಗುತ್ತಿದೆ. ಹೀಗಾಗಿ ನಾಡಿಗೆ ಕಾಡುಪ್ರಾಣಿಗಳ ಪ್ರವೇಶವಾಗುತ್ತದೆ ಎಂದು ಹೇಳಿದ್ದರು. ಅರಣ್ಯ ಸಂವರ್ಧನೆಯಾಗದೇ ಇದ್ದರೆ ನೀರು, ಗಾಳಿ, ಮಳೆ ಎಲ್ಲದಕ್ಕೂ ಪರಿಣಾಮ ಬೀರುತ್ತದೆ. ಹೀಗಾಗಿ ಕ್ರಮ ಅಗತ್ಯ ಎಂದು ಹೇಳಿದ್ದರು.

ಹೆಚ್ಚಿನ ಓದಿಗೆ : www.theruralmirror.com

## ಬಿಹಾರ ಸೇರಿ ಹಲವು ರಾಜ್ಯಗಳಲ್ಲಿ 2 ದಿನ ಭಾರಿ ಮಳೆ



ಕೊಂಕಣ, ಗೋವಾ, ಮಹಾರಾಷ್ಟ್ರ, ಕೇರಳ, ಕರ್ನಾಟಕ, ಚಂಡೀಗಢ, ಬಿಹಾರ ಸೇರಿದಂತೆ ಹಲವು ರಾಜ್ಯಗಳ ಮುಂದಿನ ಎರಡು ದಿನಗಳ ಕಾಲ ಭಾರಿ ಮಳೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಪಶ್ಚಿಮ ಉತ್ತರ ಪ್ರದೇಶ, ಹರಿಯಾಣ ಮತ್ತು ಪಂಜಾಬ್ ಹಾಗೂ ಈಶಾನ್ಯ ರಾಜ್ಯಗಳಲ್ಲೂ ಸಹ ಭಾರಿ ವರ್ಷಧಾರೆ ಸುರಿಯುವ ಸಾಧ್ಯತೆ ಇದೆ.ಅಂಡಮಾನ್-ನಿಕೋಬಾರ್ ದ್ವೀಪಗಳಲ್ಲೂ ಸಹ ಇದೇ 26ರ ವರೆಗೆ ಮಳೆಯಾಗುವ ನಿರೀಕ್ಷೆ ಇದೆ ಎಂದು ಇಲಾಖೆ ತಿಳಿಸಿದೆ.ಈ ಮಧ್ಯೆ, ಹಿಮಾಚಲ ಪ್ರದೇಶದಲ್ಲಿ ಭಾರಿ ಮುಂಗಾರು ಮಳೆಯಿಂದಾಗಿ ಜನಜೀವನ ಅಸ್ತವ್ಯಸ್ತಗೊಂಡಿದೆ. ಹಲವೆಡೆ ರಸ್ತೆ ಕುಸಿದು, ಸಂಚಾರಕ್ಕೆ ಅಡಚಣೆಯಾಗಿದೆ.










# ದ ರೂರಲ್ ಮಿರರ್.ಕಾಂ


# ಜನನ-ಮರಣ 21 ದಿನಗಳೊಳಗೆ ನೋಂದಣಿ ಕಡ್ಡಾಯ



ಪ್ರತಿಯೊಂದು ಜನನ ಮರಣದ ನೋಂದಣಿ ಕಡ್ಡಾಯವಾಗಿದ್ದು, ಘಟನೆ ಸಂಭವಿಸಿದ 21 ದಿನಗಳೊಳಗೆ ನಗರ/ ಗ್ರಾಮ ಪಂಚಾಯತ್ ನೋಂದಣಾಧಿಕಾರಿಗಳ ಮೂಲಕ ನೋಂದಣಿ ಮಾಡಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಡಾ. ಜಿ. ಸಂತೋಷ್ ಕುಮಾರ್ ಸೂಚಿಸಿದ್ದಾರೆ. ದಕ ಜಿಲ್ಲಾಧಿಕಾರಿ ಕಚೇರಿಯಲ್ಲಿ ಮಂಗಳವಾರ ನಡೆದ ಜನನ-ಮರಣ ನೋಂದಣಿ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ನಗರ ವ್ಯಾಪ್ತಿಯಲ್ಲಿ ಬೇರೆ ಜಿಲ್ಲೆಯ ವ್ಯಕ್ತಿಯು ಅಪಘಾತ ಅಥವಾ ಇನ್ನಿತರ ಅಪರಾಧ ಕೃತ್ಯಗಳ ಮೂಲಕ ಸಾವನ್ನಪ್ಪಿದ್ದರೆ ಮರಣ ನೋಂದಣಿಯನ್ನು ಮಾಡಲು ಸಂಬಂಧಿಸಿದ ಅಧಿಕಾರಿಗಳಿಗೆ ನಿಖರ ಮಾಹಿತಿ ಮತ್ತು ಅಗತ್ಯ ದಾಖಲೆಗಳನ್ನು ನೀಡಬೇಕು ಎಂದು ಪೊಲೀಸ್ ಇಲಾಖೆ ಅಧಿಕಾರಿಗಳಿಗೆ ಅವರು ಸೂಚಿಸಿದರು.

ಗ್ರಾಮಾಂತರ ಮತ್ತು ನಗರ ಪ್ರದೇಶದಲ್ಲಿ 678 ನೋಂದಣಿ ಘಟಕಗಳು ಕಾರ್ಯನಿರ್ವಹಿಸುತ್ತಿದ್ದು, ಜನನ ಮತ್ತು ಮರಣ ನೋಂದಣಿಯನ್ನು ಯಾವುದೇ ಕಾರಣಕ್ಕೂ ವಿಳಂಬವಾಗಿ ಮಾಡಬಾರದು. ಜನನ ಮತ್ತು ಮರಣ ಘಟನೆಗಳು ನಡೆದ 21 ದಿನದ ನಂತರ ನೋಂದಾಯಿಸಿದರೆ ಅದನ್ನು ತಡನೋಂದಣಿ ಎಂದು ಪರಿಗಣಿಸಿ, ವಿಳಂಬ ಶುಲ್ಕ ರೂ. 20 ನ್ನು ಪಡೆಯಲಾಗುತ್ತದೆ. ತಡ ನೋಂದಣಿಯನ್ನು ಕಡಿಮೆಗೊಳಿಸಲು ಅಗತ್ಯ ಕ್ರಮವಹಿಸಬೇಕು ಎಂದು ಅವರು ತಿಳಿಸಿದರು. ತಾಲೂಕು ಮಟ್ಟದಲ್ಲಿ ಜನನ ಮರಣ ನೋಂದಣಿ ಸಮನ್ವಯ ಸಮಿತಿ ಸಭೆಯನ್ನು ನಡೆಸಬೇಕು ಎಂದು ತಾಲೂಕು ಮಟ್ಟದ ಅಧಿಕಾರಿಗಳಿಗೆ ಅವರು ಸೂಚಿಸಿದರು. ಜನನ ಮತ್ತು ಮರಣದ ದಾಖಲೆಗಳನ್ನು ಹಾಳಾಗದಂತೆ ಸಮರ್ಪಕವಾಗಿ ನಿರ್ವಹಿಸಬೇಕು ಎಂದು ಪಟ್ಟಣ ಪಂಚಾಯತ್ ಅಧಿಕಾರಿಗಳಿಗೆ ಹಾಗೂ ಸಂಬಂಧ ಪಟ್ಟ ಇಲಾಖೆಗಳಿಗೆ ಅವರು ಸೂಚಿಸಿದರು.

ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ಎ. ಆರ್ ಶ್ರೀಧರ್ ಮಾತನಾಡಿ, ಸರಕಾರಿ ಮತ್ತು ಖಾಸಗಿ ಆಸ್ಪತ್ರೆಯಲ್ಲಿ ಸಂಭವಿಸುವ ಎಲ್ಲಾ ಜನನ ಮತ್ತು ಮರಣ ಘಟನೆಗಳನ್ನು ನೊಂದಣಾಧಿಕಾರಿಗಳಿಗೆ ವರದಿ ಮಾಡಬೇಕು. ನೋಂದಣಾಧಿಕಾರಿಗಳು ಅಥವಾ ಉಪ ನೋಂದಣಾಧಿಕಾರಿಗಳು ವರದಿ ಮಾಡಿದ ಘಟನೆಗಳನ್ನು ನೋಂದಣಿ ಮಾಡಿ ಪ್ರಕ್ರಿಯೆ ಮುಗಿದ ನಂತರ ಮಾಹಿತಿದಾರರಿಗೆ ಜನನ ಪ್ರಮಾಣ ಪತ್ರವನ್ನು ಒದಗಿಸಬೇಕು. ಗ್ರಾಮ ಒನ್ ಕಚೇರಿಯಲ್ಲಿ ಸಾರ್ವಜನಿಕರು ಜನನ ಮರಣ ನೋಂದಣಿಗೆ ಅರ್ಜಿ ಸಲ್ಲಿಸಬಹುದು ಎಂದು ಹೇಳಿದರು. ಇ-ಜನ್ಮ ತಂತ್ರಾಂಶದಲ್ಲಿ ಜನನ ಮರಣ ಘಟನೆಗಳನ್ನು ನೋಂದಾಯಿಸುವಾಗ ಆಧಾರ್ ಸಂಖ್ಯೆಯನ್ನು ಅಥವಾ ಇತರೆ ದಾಖಲೆಗಳನ್ನು ಅಪ್ಡೇಟ್ ಮಾಡಬೇಕು. ಮರಣ ಘಟನೆಗಳ ಸಂದರ್ಭದಲ್ಲಿ ಮೃತರ ಆಧಾರ್ ನಂಬರ್ ಬದಲು ಅರ್ಜಿದಾರರ ಆಧಾರ್ ನಂಬರ್ ನಮೂದಿಸಿದರೆ, ಸರಕಾರದಿಂದ ಸವಲತ್ತುಗಳು ಸಿಗುವುದಿಲ್ಲ ಎಂದು ಹೇಳಿದರು. ಜಿಲ್ಲೆಯ ಎಲ್ಲಾ ನೋಂದಣಿ ಘಟಕವು ನಿಯಮಾನುಸಾರ ನೋಂದಣಿ ಚಟುವಟಿಕೆ ನಡೆಸುತ್ತಿರುವ ಬಗ್ಗೆ ಹಾಗೂ ಶೇಖಡ 100 ರಷ್ಟು ಘಟನೆಗಳು ದಾಖಲಾತಿಯಾಗಿರುವ ಬಗ್ಗೆ ಪರಿಶೀಲನೆಯನ್ನು ತಾಂತ್ರಿಕ ಇಲಾಖೆಯ ಅಧಿಕಾರಿಗಳ ನೇತೃತ್ವದಲ್ಲಿ ನಡೆಸಲಾಗುತ್ತದೆ ಎಂದು ಅವರು ಸಭೆಗೆ ಮಾಹಿತಿ ನೀಡಿದರು.

# 40 ಸಾವಿರ ಪಂಪ್‌ಸೆಟ್‌ಗಳಿಗೆ ಸರ್ಕಾರ ಅನುಮೋದನೆ

ರಾಜ್ಯದಲ್ಲಿ ಕುಸುಮ್ ಬಿ ಯೋಜನೆಯಡಿಯಲ್ಲಿ 40 ಸಾವಿರ ಪಂಪ್‌ಸೆಟ್‌ಗಳಿಗೆ ಅನುಮೋದನೆ ನೀಡಲಾಗಿದ್ದು, ಅನುಷ್ಠಾನಗೊಳಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಕೇಂದ್ರ ಸರ್ಕಾರ ಶೇಕಡ 30 ರಷ್ಟು ರಾಜ್ಯ ಸರ್ಕಾರ ಶೇಕಡ 50 ರಷ್ಟು ಸಬ್ಸಿಡಿ ನೀಡುತ್ತಿದ್ದು, ಫಲಾನುಭವಿಗಳು ಶೇಕಡ 20 ರಷ್ಟು ಭರಿಸಬೇಕು ಎಂದು ಹೇಳಿದ್ದಾರೆ 25 ಸಾವಿರ ರೈತರು ಈ ಯೋಜನೆಯಡಿ ಅರ್ಜಿ ಸಲ್ಲಿಸಿದ್ದು, ರಾಜ್ಯ ಸರ್ಕಾರ 752 ಕೋಟಿ ರೂಪಾಯಿ ವೆಚ್ಚ ಮಾಡಲಿದೆ. ಯೋಜನೆ ಸಮರ್ಪಕ ಅನುಷ್ಠಾನಗೊಂಡ ಬಳಿಕ ಮೊತ್ತ ಕಡಿಮೆಯಾಗಲಿದೆ.

# ಮನೆ ಬಾಗಿಲಿಗೆ ಆರೋಗ್ಯ ಸೇವೆ ಒದಗಿಸಲು ಗೃಹ ಆರೋಗ್ಯ ಯೋಜನೆ ಜಾರಿ

ಎಚ್.ಕೆ. ಪಾಟೀಲ್, ಮನೆ ಬಾಗಿಲಿಗೆ ಆರೋಗ್ಯ ಸೇವೆ ಒದಗಿಸಲು ಗೃಹ ಆರೋಗ್ಯ ಯೋಜನೆ ಜಾರಿ ಮಾಡಿದೆ. ಮಧುಮೇಹ, ರಕ್ತದೊತ್ತಡ, ನರರೋಗ, ಪಾಶ್ವವಾಯು, ಕ್ಯಾನ್ಸರ್ ಸೇರಿದಂತೆಸುಮಾರು 14 ವಿವಿಧ ಕಾಯಿಲೆಗಳ ಬಗ್ಗೆ ಆಶಾ ಕಾರ್ಯಕರ್ತೆರು ಮತ್ತು ಆರೋಗ್ಯ ಇಲಾಖೆ ಅಧಿಕಾರಿಗಳು ಜನರಲ್ಲಿ ಜಾಗೃತಿ ಮೂಡಿಸಲಿದ್ದಾರೆ. ಯಾವ ಸಮುದಾಯ ಆರೋಗ್ಯಯುತವಾಗಿರುತ್ತದೆಯೋ ಅಂತಹ ರಾಷ್ಟ್ರ ಸಂಪತ್ಭರಿತ ಮತ್ತು ಶಕ್ತಿಯುತವಾಗಿರುತ್ತದೆ.



ಇಂತಹ ದೇಶವನ್ನು ನಿರ್ಮಾಣ ಮಾಡಲು ಎಲ್ಲರ ಸಹಕಾರ ಅಗತ್ಯ ಎಂದು ತಿಳಿಸಿದರು.


ಹೆಚ್ಚಿನ ಓದಿಗೆ : www.theruralmirror.com